# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ/ಸಭೆ- 5/2020-21 ದಿನಾಂಕ : 01-12-2020

## -: ಸಭಾ ಸೂಚನಾ ಪತ್ರ :-

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020-21 ದಿನಾಂಕ : 21-09-2020.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪ ವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ-59 ಮಾರುತಿ ಸೇವಾನಗರ ವ್ಯಾಪ್ತಿಯ ವಾರ್ಡ್ ಕಛೇರಿಯಲ್ಲಿ ದಿನಾಂಕ: 05-12-2020 ರಂದು ಬೆಳಿಗ್ಗೆ 11.00 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಿದೆ.

## -: ಸಭಾ ಅಜೆಂಡಾ :-

| | |
|---|---|
| 1 | ಹಿಂದಿನ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2 | ವಾರ್ಡ್ ಸಮಿತಿಯನ್ನು ರಚಿಸುವ ಬಗ್ಗೆ. |
| 3 | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ. |
| 4 | ವಾರ್ಡ್ ವ್ಯಾಪ್ತಿಯ ಕಾಮಗಾರಿಗಳು, ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ. |
| 5 | ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಮತ್ತು ಮಳೆ ನೀರಿನ ಸಮಸ್ಯೆಯ ಬಗ್ಗೆ ಚರ್ಚಿಸುವ ವಿಚಾರ. |
| 6 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಚರ್ಚಿಸುವ ಬಗ್ಗೆ. |
| 7 | ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಚಾರಗಳು |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

ಸಹಿ/-

ಕಾರ್ಯದರ್ಶಿ ವಾರ್ಡ್ ಸಮಿತಿ-59

ಹಾಗೂ ಸಹಾಯಕ ಅಭಿಯಂತರರು,

ವಾರ್ಡ್-59

**ಪ್ರತಿಯನ್ನು**

1. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.

ಮ.ತಿ.ನೋ

2. ತೋಟಗಾರಿಕಾ ಅಧೀಕ್ಷಕರು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ

3. ಅರಣ್ಯ ಸಂರಕ್ಷಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ

4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಮಾರುತಿಸೇವಾನಗರ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ(ಸರ್ವಜ್ಞನಗರ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

8. ಸಹಾಯಕ ಕಂದಾಯ ಅಧಿಕಾರಿಗಳು, ಮಾರುತಿಸೇವಾನಗರ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂದಿಯನ್ನು ನಿಯೋಜಿಸಲು ಕೋರಿದೆ.

9. ಪೊಲೀಸ್ ಇನ್ಸ್‌ಫೆಕ್ಟರ್, ಬಾಣಸವಾಡಿ / ರಾಮಮೂರ್ತಿನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳು ಮತ್ತು ಮೂಲಭೂತ ಸೌಕರ್ಯಗಳು ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

11. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ಬೃಹತ್ ನೀರುಗಾಲುವೆ(ಎಸ್‌ಡಬ್ಲ್ಯೂಡಿ)ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

12. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.

01/12/2020

**ಕಾರ್ಯದರ್ಶಿ ವಾರ್ಡ್ ಸಮಿತಿ–59**
**ಹಾಗೂ ಸಹಾಯಕ ಅಭಿಯಂತರರು,**
**ವಾರ್ಡ್–59**

ವಾರ್ಡ್ - 59 ರಲ್ಲಿ ದಿನಾಂಕ 05/12/2020 ರಂದು
ವಾರ್ಡ್ ಕಮಿಟಿ ಸಭೆಯ ಹಾಜರಾತಿ.

Page No.
Date / /

1) Mahesh Tax Inspector Ward 59. [signature]

2 C. Kumaresan Garden Dep [signature]

3) Dr. Vinutha Doctor ward 59 Vinutha
7760590008.

4) Supriya.M JrHA(F) Supriya.M

5) Sumithra JrHA(F) Sumithra

6. Cynthia Stephen Social Worker Cynthia S.

7) Kathleen " " [signature]
8 V. Kuch [signature]

9 G.V. Nagaraju Assessor 59 [signature] 5/12

10. A.MANI SHANKAR. SrHI W.59 A. Mani Shankar SrHI

11 D. MAHENDRA PRASAD RI - 59 [signature]

12 M.V. CHALAPATHY. J hally.
9945043337 [signature]

13) B.M. Chakravarthy 9108213987 [signature]

14) Narasimha.K 9980923150 [signature]

15] Naveen Kumar.L; AE(El), Bescom. [signature]
16) K. MOUNESH. [signature]
17) Penchalaiah 59/ward (sup) Gardener [signature]

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ವಾರ್ಡ್ ಕಛೇರಿಯಲ್ಲಿ ದಿನಾಂಕ: 05-12-2020 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಹಾಜರಿದ್ದ ಸದಸ್ಯರು,

1. ಶ್ರೀ ನಾರಾಯಣಸ್ವಾಮಿ, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ.ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶಾಂತಕುಮಾರ್ ಲೇಔಟ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ (ರಿ)
4. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು
5. ಸ್ಥಳೀಯರು, ಜೀವನಹಳ್ಳಿ

ಹಾಜರಿದ್ದ ಅಧಿಕಾರಿಗಳು

1. ಡಾ॥ ವಿನುತಾ, ವೈದ್ಯಾಧಿಕಾರಿಗಳು
2. ಶ್ರೀ ಮಹೇಂದ್ರ ಪ್ರಸಾದ್, ಕಂದಾಯ ನಿರೀಕ್ಷಕರು
3. ಶ್ರೀ ಮಹೇಶ್‌ಕುಮಾರ್, ಕರ ವಸೂಲಿಗಾರ, ಮಾರುತಿಸೇವಾನಗರ
4. ಶ್ರೀ ನಾಗರಾಜು, ಅಸೆಸರ್, ಮಾರುತಿಸೇವಾನಗರ
5. ಶ್ರೀ ನವೀನ್‌ಕುಮಾರ್ ಎಲ್. ಸಹಾಯಕ ಅಭಿಯಂತರರು, ಬೆಸ್ಕಾಂ

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರಸಂ | ಮಾಹಿತಿ | ಕ್ರಮ |
|---|---|---|
| i | ಆರೋಗ್ಯ ಇಲಾಖೆ (**Medical Officer**) | |
| | ಡಾ॥ ವಿನುತಾ, ವೈದ್ಯಾಧಿಕಾರಿಗಳು ರವರು ಮಾತನಾಡಿ ವಾರ್ಡಿನಲ್ಲಿ ಕೋವಿಡ್ ಸೋಂಕಿತ ವ್ಯಕ್ತಿಗಳು ಹೋಮ್ ಐಸೋಲೇಷನ್ ನಲ್ಲಿ ಚಿಕಿತ್ಸೆ ಪಡೆಯಲು ಇಚ್ಛಿಸುತ್ತಿದ್ದು, ಸದರಿ ಸೋಂಕಿತರಿಗೆ ಎಮರ್ಜೆನ್ಸಿ ಮೊಬಿಲೈಜೇಷನ್ ಕಿಟ್‌ಗಳನ್ನು ಹಾಗೂ ಸೋಂಕಿತರಿಗೆ ಆಹಾರದ ದಿನಸಿ ಕಿಟ್‌ಗಳನ್ನು ಸರಬರಾಜು ಮಾಡಲು ಸಭೆಯಲ್ಲಿ ಪ್ರಸ್ತಾಪಿಸಿದರು. | ದಿನಸಿ ಕಿಟ್ ಹಾಗೂ ಎಮರ್ಜೆನ್ಸಿ ಮೊಬಿಲೈಜೇಷನ್ ಕಿಟ್‌ಗಳನ್ನು ಸರಬರಾಜು ಮಾಡಲು ಕ್ರಮ ವಹಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಿದರು. |
| ii | ಬೀದಿ ದೀಪಗಳ ನಿರ್ವಹಣೆ (**Street Lights**) | |
| | ವಾರ್ಡ್ ವ್ಯಾಪ್ತಿಯಲ್ಲಿರುವ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದನ್ನು ಸಭೆಯಲ್ಲಿ ಪ್ರಸ್ತಾಪಿಸಿ, ವಾರ್ಡ್ ವ್ಯಾಪ್ತಿಯಲ್ಲಿ ಸುಮಾರು 15 ಬೀದಿ ದೀಪಗಳನ್ನು ಅಳವಡಿಸುವುದು ಅವಶ್ಯವಾಗಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಕೂಡಲೇ ಬೀದಿ ದೀಪಗಳನ್ನು ಅಳವಡಿಸಲು ಸಭೆಯಲ್ಲಿ ಹಾಜರಿದ್ದ | ಸದರಿ ವಿಷಯಕ್ಕೆ ಶ್ರೀ ಶಂಕರ್ ರವರಿಗೆ ದೂರವಾಣಿ ಮುಖೇನ ಬೀದಿ ದೀಪಗಳ ನಿರ್ವಹಣೆ ಹಾಗೂ ಬೀದಿ ದೀಪಗಳನ್ನು ಅಳವಡಿಸಲು ಕ್ರಮ ವಹಿಸಲು ಸೂಚಿಸಲಾಯಿತು. |

| | | |
|---|---|---|
| | ಸದಸ್ಯರು ಪ್ರಸ್ತಾಪಿಸಿದರು. | |
| iii | **ಘನತ್ಯಾಜ್ಯ ನಿರ್ವಹಣೆ (SWM Department)** | |
| | ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸ ಸಂಗ್ರಹಣೆ ಮಾಡುವ ಆಟೋ ಟಿಪ್ಪರ್‌ಗಳು ಸರಿಯಾಗಿ ವಾರ್ಡಿನಲ್ಲಿ ಬರದೇ ಇರುವುದರಿಂದ ಸತ್ಯಾನಗರ, ಮ್ಯಾಕ್ ಪರ್ಸನ್ ರಸ್ತೆಗಳಲ್ಲಿ ಸಾರ್ವಜನಿಕರು ಕಸವನ್ನು ರಸ್ತೆಯ ಕಡೆಗಳಲ್ಲಿ ಎಸೆಯುತ್ತಿರುವುದು ಕಂಡುಬಂದಿರುತ್ತದೆ. ಇದರಿಂದ ಹಾಲಿ ವಾರ್ಡಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಆಟೋ ಟಿಪ್ಪರ್‌ಗಳ ಸಂಖ್ಯೆಗಳನ್ನು ಹೆಚ್ಚಿಸಿ, ಮನೆ ಮನೆಗಳಿಂದ ಕಸ ಸಂಗ್ರಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲು ಹಾಗೂ ಸಾರ್ವಜನಿಕರಿಗೆ ಜನಜಾಗೃತಿ ಮೂಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | **AEE-SWM** ರವರಿಗೆ ಈ ಬಗ್ಗೆ ಕ್ರಮ ವಹಿಸಲು ಸೂಚಿಸಲಾಯಿತು. |
| iv | **ವಿದ್ಯುತ್ ಇಲಾಖೆ (BESCOM Department)** | |
| | ಮಾರುತಿಸೇವಾನಗರ ವ್ಯಾಪ್ತಿಯ ಜೀವನಹಳ್ಳಿ ಹಾಗೂ ಬಾಣಸವಾಡಿ ಮುಖ್ಯರಸ್ತೆಗಳಲ್ಲಿ ಕೇಬಲ್ ಅಳವಡಿಸಲು ರಸ್ತೆಗಳನ್ನು ಕತ್ತರಿಸುತ್ತಿರುವುದು ಹಾಗೂ ರಸ್ತೆ ಬದಿಯಲ್ಲಿರುವ ಮರದ ಕೊಂಬೆ ರೆಂಬೆಗಳನ್ನು ಕತ್ತಿರುಸುತ್ತಿದ್ದು ಸದರಿ ಮರದ ಕೊಂಬೆ ರೆಂಬೆಗಳನ್ನು ಸದರಿ ಸ್ಥಳದಿಂದ ತೆರವುಗೊಳಿಸದೇ ಇರುವುದರಿಂದ ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗುತ್ತಿರುವುದಾಗಿ ಹಾಗೂ ಮಚಲಿ ಬೆಟ್ಟದಲ್ಲಿರುವ ವಿದ್ಯುತ್ ಕಂಬವನ್ನು ಸದರಿ ಸ್ಥಳದಿಂದ ಹಸ್ತಾಂತರಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | ವಿದ್ಯುತ್ ಇಲಾಖೆ (**BESCOM Department**) ಸಹಾಯಕ ಅಭಿಯಂತರರು ರವರು ಈ ಬಗ್ಗೆ ಕ್ರಮವಹಿಸುವುದಾಗಿ ತಿಳಿಸಿದರು. |
| v | **ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ (BWSSB)** | |
| | • ವಾರ್ಡ್ ವ್ಯಾಪ್ತಿಯಲ್ಲಿ ಸಿಲ್ಟ್ ಮತ್ತು ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಿ, ತೆರವುಗೊಳಿಸಿರುವ ತ್ಯಾಜ್ಯವನ್ನು ತೆರವುಗೊಳಿಸದೇ ಇರುವುದನ್ನು ಕೂಡಲೇ ತೆರವುಗೊಳಿಸುವುದು.<br>• ಮುದ್ದಪ್ಪ ಗಾರ್ಡನ್‌ನಲ್ಲಿ ಅನಧಿಕೃತವಾಗಿ ಸಂಪರ್ಕವನ್ನು ಪಡೆಯಲಾಗಿದ್ದು, ಸದರಿಯವರಿಗೆ ಮೀಟರ್ ಅಳವಡಿಸಿ, ಕ್ರಮ ಬದ್ಧಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು.<br>• ಮುಕುಂದ ಥಿಯೇಟರ್ ಹತ್ತಿರ, ಬಾಣಸವಾಡಿ ಜಂಕ್ಷನ್‌ನಲ್ಲಿ ನೀರು ಪೋಲಾಗುತ್ತಿರುವುದನ್ನು ತಡೆಗಟ್ಟಲು ಕ್ರಮವಹಿಸಲು ಸಭೆಗೆ ತಿಳಿಸಿದರು. | ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮದ ಅಧಿಕಾರಿಗಳು ಈ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದರು. |
| | ಬೃಹತ್ ನೀರುಗಾಲುವೆ (SWD) | |
| vi | ವಾರ್ಡ್ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆಯಲ್ಲಿರುವ ಬೃಹತ್ ನೀರುಗಾಲುವೆಯಲ್ಲಿ ಮರವಿದ್ದು, ಸದರಿ ಮರದ ಕೊಂಬೆ ರೆಂಬೆಗಳನ್ನು ಕತ್ತರಿಸಿ, ಕತ್ತರಿಸಿದ ಕೊಂಬೆ ರೆಂಬೆಗಳನ್ನು ಸದರಿ ಸ್ಥಳದಿಂದ ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು. | ಈ ಬಗ್ಗೆ ಸಭೆಯಲ್ಲಿ ದೂರವಾಣಿ ಮುಖೇನ ಸದರಿ ಮರದ ಕೊಂಬೆ ರೆಂಬೆಗಳನ್ನು ಕತ್ತರಿಸಿ, ತೆರವುಗೊಳಿಸಲು ಕ್ರಮ ವಹಿಸಲು ಸೂಚಿಸಲಾಯಿತು. |

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ / ಕಛೇರಿ ಕಡತಕ್ಕೆ.